ಅ) ಹಾಗಿದ್ದಲ್ಲಿ ಅದನ್ನು ಸರಿಪಡಿಸಲು ಸರ್ಕಾರ ಕ್ರಮ ಕೈಗೊಳ್ಳದೆ ಇರುವುದಕ್ಕೆ ಕಾರಣಗಳೇನು?

ಶ್ರೀ ಜಿ. ಪುಟ್ಟಸ್ವಾಮಿಗೌಡ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):-

ಅ) ಪ್ರಾಥಮಿಕ ಆರೋಗ್ಯ ಕೇಂದ್ರ, ನೇರಳಗುಡ್ಡ ಮತ್ತು ಯಳನಾಡುಗಳಲ್ಲಿ ವೈದ್ಯರಿಲ್ಲದಿರುವುದು ಸರ್ಕಾರಕ್ಕೆ ತಿಳಿದಿದೆ. ಡಾ. ಸುರೇಶ್, ವೈದ್ಯಾಧಿಕಾರಿಗಳು, ಪ್ರಾಥಮಿಕ ಆರೋಗ್ಯ ಕೇಂದ್ರ, ತಾವರೆಕೆರೆ ಮತ್ತು ಡಾ. ಚನ್ನಮಲ್ಲಯ್ಯ, ವೈದ್ಯಾಧಿಕಾರಿಗಳು, ಪ್ರಾಥಮಿಕ ಆರೋಗ್ಯ ಕೇಂದ್ರ, ಹುಳಿಯಾರು ಇವರುಗಳನ್ನು ಅನುಕ್ರಮವಾಗಿ ನೇರಳಗುಡ್ಡ ಮತ್ತು ಯಳನಾಡು ಪ್ರಭಾರದಲ್ಲಿಡಲಾಗಿದೆ.

ಅಳಿಲುಘಟ್ಟ ಹಾಗೂ ಹಾಗಲವಾಡಿ, ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಕೆಲಸ ಮಾಡುತ್ತಿರುವ ವೈದ್ಯಾಧಿಕಾರಿಗಳು ಅಷ್ಟು ಸಮರ್ಥರಲ್ಲವೆಂಬುದನ್ನು ಸರ್ಕಾರದ ಗಮನಕ್ಕೆ ತಂದಿರುತ್ತದೆ.

ಆ) ಯಳನಾಡು ಮತ್ತು ನೇರಳಗುಡ್ಡ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿನ ಖಾಲಿ ಇರುವ ವೈದ್ಯಾಧಿಕಾರಿಗಳ ಹುದ್ದೆಗಳನ್ನು ಆದಷ್ಟು ಬೇಗನೆ ಭರ್ತಿ ಮಾಡಲಾಗುವುದು. ಅಳಿಲುಘಟ್ಟ ಮತ್ತು ಹಾಗಲವಾಡಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿನ ವೈದ್ಯಾಧಿಕಾರಿಗಳನ್ನು ಆದಷ್ಟು ಬೇಗನೆ ಬದಲಾಯಿಸಲಾಗುವುದು.

ಬೀದರ್ ಜಿಲ್ಲೆಯನ್ನು ಕೈಗಾರಿಕಾ ರೈತವಾರು ಜಿಲ್ಲೆಯೆಂದು ಘೋಷಣೆ

274 (391) ಶ್ರೀ ಬಸವರಾಜ ಪಾಟೀಲ್ ಅಟ್ಟೂರ್ (ಬಸವಕಲ್ಯಾಣ):-ಮಾನ್ಯ ಭಾರಿ ಮತ್ತು ಮಧ್ಯಮ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ;

ಅ) ಬೀದರ್ ಜಿಲ್ಲೆಯನ್ನು ಕೈಗಾರಿಕಾ ರೈತಾವಾರು ಜಿಲ್ಲೆ ಎಂದು ಯಾವಾಗ ಘೋಷಿಸಲಾಯಿತು;

ಆ) ಬೀದರ್ ಜಿಲ್ಲೆಯಲ್ಲಿ ಎನ್.ಜಿ.ಇ.ಎಫ್. ಮತ್ತು ಎಂ.ಪಿ.ಎಂ. ಉದ್ಯಮಗಳನ್ನು ಸ್ಥಾಪಿಸುವ ಉದ್ದೇಶ ಸರ್ಕಾರದ ಆಲೋಚನೆಯಲ್ಲಿದೆಯೇ ;

ಇ) ಇದ್ದಲ್ಲಿ ಯಾವಾಗ ಪ್ರಾರಂಭಿಸಲಾಗುವುದು ;

ಶ್ರೀಮತಿ ಮನೋರಮ ಮಧ್ವರಾಜ್ (ಭಾರಿ ಮತ್ತು ಮಧ್ಯಮ ಕೈಗಾರಿಕಾ ಸಚಿವರು):-

ಅ) ಬೀದರ್ ಜಿಲ್ಲೆಯನ್ನು ಕೈಗಾರಿಕಾ ರಹಿತ ಜಿಲ್ಲೆ ಎಂದು ಕೇಂದ್ರ ಸರ್ಕಾರದ ವತಿಯಿಂದ ಏಪ್ರಿಲ್ 1983 ರಲ್ಲಿ ಘೋಷಿಸಲಾಯಿತು.

ಆ) ಇಲ್ಲ.

ಇ) ಉದ್ಭವಿಸುವುದಿಲ್ಲ.

ಬಸವಕಲ್ಯಾಣ ತಾಲ್ಲೂಕಿನ ಕೈಗಾರಿಕಾ ಅಭಿವೃದ್ಧಿ

275 (392), ಶ್ರೀ ಬಸವರಾಜ ಪಾಟೀಲ್ ಅಟ್ಟೂರ್ (ಬಸವಕಲ್ಯಾಣ):- ಮಾನ್ಯ ಭಾರಿ ಮತ್ತು ಮಧ್ಯಮ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ;

1) ಬೀದರ್ ಜಿಲ್ಲೆಯ ಬಸವ ಕಲ್ಯಾಣ ತಾಲ್ಲೂಕಿನಲ್ಲಿ ಕೈಗಾರಿಕಾ ಅಭಿವೃದ್ಧಿ ಪಡಿಸಲು ಕೈಗಾರಿಕಾ ಅಭಿವೃದ್ಧಿ ಪ್ರದೇಶಕ್ಕೆ ಸೇರಿಸಲಾಗಿದೆಯೇ;

2) ಹಾಗಿದ್ದಲ್ಲಿ ಅದನ್ನು ಯಾವಾಗ ಸೇರಿಸಲಾಯಿತು;

3) ಬಸವ ಕಲ್ಯಾಣದ ತ್ರಿಪಾಂತ ಗ್ರಾಮದ ಸುತ್ತ ಮುತ್ತ 100 ಎಕರೆ ಭೂಮಿಯನ್ನು ಸರ್ಕಾರ ವಶಪಡಿಸಿಕೊಂಡಿರುವುದು ನಿಜವೇ?